**Akashvani : Bangalore**
**Regional Bulletin In Kannada**
**28.08.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ವಾಲ್ಮೀಕಿ ನಿಗಮದ ಅಕ್ರಮ ಪ್ರಕರಣ - ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಬಿ.ನಾಗೇಂದ್ರ ಘೋಷಣೆ**

**೨. ಪಶ್ಚಿಮ ಘಟ್ಟ ಪ್ರದೇಶದಲ್ಲಿ ಕಸ್ತೂರಿ ರಂಗನ್ ವರದಿ ಜಾರಿಗೆ ಅವಕಾಶ ನೀಡುವುದಿಲ್ಲ - ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ**

**೩. ಕೈಗಾರಿಕಾ ಅಭಿವೃದ್ಧಿಗೆ ಬೆಂಗಳೂರು ಹೊರತುಪಡಿಸಿ, ಐದು ನಗರಗಳನ್ನು ಗುರುತಿಸಲು ಮುಖ್ಯಮಂತ್ರಿ ಸೂಚನೆ**

**೪. ಧಾರವಾಡದ ಕಾನೂನು ವಿಶ್ವವಿದ್ಯಾನಿಲಯವನ್ನು ಮತ್ತಷ್ಟು ಬಲಪಡಿಸುವಂತೆ ಸರ್ಕಾರಕ್ಕೆ ಉತ್ತರ ಕರ್ನಾಟಕ ಭಾಗದ ಶಾಸಕರ ಮನವಿ**

**೫. ಪಶು ವೈದ್ಯಾಧಿಕಾರಿಗಳ ನೇಮಕಾತಿ ಹಗರಣ; ಸಿಐಡಿ ಅಧಿಕಾರಿಗಳಿಂದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ವಿಚಾರಣೆ**

**<><*<><>*><>**

ವಾಲ್ಮೀಕಿ ನಿಗಮದ ಅಕ್ರಮಕ್ಕೆ ಸಂಬಂಧಿಸಿದಂತೆ ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಬಿ.ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಘೋಷಿಸಿದ್ದಾರೆ. ಪ್ರತಿಪಕ್ಷಗಳ ಒತ್ತಡದ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ಮುಜುಗರ ಉಂಟುಮಾಡಬಾರದು ಎಂಬ ಹಿನ್ನೆಲೆಯಲ್ಲಿ ರಾಜೀನಾಮೆ ನೀಡುವುದಾಗಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಈ ಹಗರಣದಲ್ಲಿ ತಾವು ಭಾಗಿಯಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಸದನದ ಸಮಯ ಹಾಳು ಮಾಡಿದವರು ಸಂವಿಧಾನ ವಿರೋಧಿಗಳು ಎಂದು ಪ್ರತಿಪಕ್ಷಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯದ ಜನರನ್ನು ವಿರೋಧ ಪಕ್ಷದವರು ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ದೂರಿದ್ದಾರೆ. ಸಂವಿಧಾನಕ್ಕೆ ತಾವು ಸಂಪೂರ್ಣವಾಗಿ ತಲೆಬಾಗುವುದಾಗಿ ಹೇಳಿದ್ದಾರೆ.

**<><*<><>*><>**

ಯಾವುದೇ ಕಾರಣಕ್ಕೂ ಕಸ್ತೂರಿ ರಂಗನ್ ವರದಿ ಜಾರಿಗೆ ಅವಕಾಶ ನೀಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, ಕೇಂದ್ರ ಸರ್ಕಾರ ಹೊರಡಿಸಿರುವ ವರದಿ ಜಾರಿ ಮಾಡುವ ಅಧಿಸೂಚನೆಯು ಜೀವ ವಿರೋಧಿ ಹಾಗೂ ಅಮಾನವೀಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಪಶ್ಚಿಮಘಟ್ಟ ಪ್ರದೇಶದ ಹತ್ತು ಜಿಲ್ಲೆಗಳ ಒಂದು ಸಾವಿರದ ೪೪೯ ಗ್ರಾಮಗಳನ್ನು ಪರಿಸರ ಸೂಕ್ಷ್ಮ ಪ್ರದೇಶಗಳೆಂದು ಘೋಷಿಸಿ, ಕೇಂದ್ರ ಸರ್ಕಾರ ಹೊರಡಿಸಿರುವ ಈ ಅಧಿಸೂಚನೆಯು ಲಕ್ಷಾಂತರ ಕುಟುಂಬಗಳನ್ನು ಆತಂಕಕ್ಕೀಡುಮಾಡಿದೆ. ಮಲೆನಾಡು ಹಾಗೂ ಪಶ್ಚಿಮಘಟ್ಟ ಪ್ರದೇಶಗಳ ಜನರ ಹಿತ ಗಮನದಲ್ಲಿಟ್ಟುಕೊಂಡು ಪರಿಹಾರ ಕಂಡುಕೊಳ್ಳಲು ಒಂದು ದಿನದ ವಿಶೇಷ ಅಧಿವೇಶನ ಕರೆಯಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ಪಶ್ಚಿಮಘಟ್ಟ ಭಾಗದ ಜನರು ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗುವುದು ಬೇಡ ಎಂದು ಧೈರ್ಯ ತುಂಬಿದ್ದಾರೆ.

**<><*<><>*><>**

ರಾಜ್ಯದ ವಿವಿಧ ಭಾಗಗಳಲ್ಲಿ ಕೈಗಾರಿಕಾ ಅಭಿವೃದ್ಧಿಯ ಉದ್ದೇಶದಿಂದ ಬೆಂಗಳೂರನ್ನು ಹೊರತುಪಡಿಸಿ, ಇತರೆ ಐದು ನಗರಗಳನ್ನು ಗುರುತಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗೃಹಕಚೇರಿ ಕೃಷ್ಣಾದಲ್ಲಿಂದು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ವಿಮಾನ ನಿಲ್ದಾಣ, ಮತ್ತಿತರ ಮೂಲಸೌಕರ್ಯ ಹೊಂದಿರುವ ಸೂಕ್ತ ಐದು ನಗರಗಳನ್ನು ಗುರುತಿಸುವಂತೆ ತಿಳಿಸಿದ್ದಾರೆ. ಕೈಗಾರಿಕೋದ್ಯಮಗಳ ಸ್ಥಾಪನೆಗೆ ಏಕಗವಾಕ್ಷಿ ಅನುಮೋದನೆಯ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ನಿಗದಿತ ಕಾಲಮಿತಿಯೊಳಗೆ ಅನುಮೋದನೆ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸೂಚನೆ ನೀಡಿದ್ದಾರೆ.

<><*<><>*><>

ಪೊಲೀಸರ ಸಂಕಷ್ಟ ಭತ್ಯೆ ಪ್ರಮಾಣವನ್ನು ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಮಾದರಿಯಲ್ಲಿ ಶೇಕಡ ೫೦ರಷ್ಟು ಹೆಚ್ಚಿಸಲು ಸರ್ಕಾರದ ಸಮ್ಮತಿ ಇದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನ ಮಾಣೆಕ್ ಷಾ ಮೈದಾನದಲ್ಲಿಂದು ರಾಜ್ಯ ಪೊಲೀಸರಿಗಾಗಿ ಸಮಗ್ರ ಸಾಮರ್ಥ್ಯವೃದ್ಧಿ ತರಬೇತಿಗೆ ಚಾಲನೆ ನೀಡಿ ಮಾತನಾಡಿದ ಅವರು, ಎನ್‌ಎಸ್‌ಜಿ ತರಬೇತಿಯಿಂದ ರಾಜ್ಯದ ಪೊಲೀಸರ ಸಾಮರ್ಥ್ಯ ಹಾಗೂ ಕೌಶಲ್ಯ ಹೆಚ್ಚಲಿದೆ ಎಂದು ತಿಳಿಸಿದ್ದಾರೆ. ಬೆಂಗಳೂರು ನಗರದಲ್ಲಿ ಗಗನಚುಂಬಿ ಕಟ್ಟಡಗಳ ಮೇಲೆ ಹೆಲಿಪ್ಯಾಡ್ ನಿರ್ಮಾಣ ಕಡ್ಡಾಯ ಎಂದು ತಿಳಿಸಿದ್ದಾರೆ. ರಾಜ್ಯದ ಪ್ರತಿಯೊಂದು ಜಿಲ್ಲೆಗಳಲ್ಲೂ ರೌಡಿಗಳ ನಿಗ್ರಹಕ್ಕೆ ಪ್ರತ್ಯೇಕ ಐಪಿಎಸ್ ಅಧಿಕಾರಿಗಳ ನೇತೃತ್ವದಲ್ಲಿ ರೌಡಿ ನಿಗ್ರಹ ಪಡೆ ರಚಿಸುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ೭೨ ಸಾವಿರ ಸರ್ಕಾರಿ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲಾಗುತ್ತಿದ್ದು, ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಮಾಡಲು ಸರ್ಕಾರದ ಹಂತದಲ್ಲಿ ಚರ್ಚೆ ನಡೆಯುತ್ತಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ರಾಜ್ಯ ಸರ್ಕಾರಿ ಪರಿಶಿಷ್ಟ ನೌಕರರ ಸಮನ್ವಯ ಸಮಿತಿಯ ೬ನೇ ರಾಜ್ಯ ಮಟ್ಟದ ಐಕ್ಯತಾ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಯೊಂದಿಗೆ ಚರ್ಚಿಸಿ, ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲಾಗುವುದು ಎಂದು ಭರವಸೆ ನೀಡಿದ್ದಾರೆ. ಸರ್ಕಾರಿ ನೌಕರರು ನಿಮ್ಮ ಮಕ್ಕಳೊಂದಿಗೆ ಬಡವರ ಮಕ್ಕಳನ್ನು ಇಂಜಿನಿಯರ್ ವೈದ್ಯರನ್ನಾಗಿ ಮಾಡುವಂತೆ ಪ್ರೋತ್ಸಾಹಿಸಿ ಎಂದು ಕರೆ ನೀಡಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ಪ್ರತ್ಯೇಕ ನೂತನ ಕಾನೂನು ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಕೈಬಿಟ್ಟು, ಪ್ರಸ್ತುತ ಹುಬ್ಬಳ್ಳಿ-ಧಾರವಾಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಉತ್ತರ ಕರ್ನಾಟಕ ಭಾಗದ ಶಾಸಕರು ಸರ್ಕಾರವನ್ನು ಒತ್ತಾಯಿಸಿದ್ದಾರೆ. ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ್ ಬೆಲ್ಲದ್, ಮಾಜಿ ಸಚಿವ ಸಿ.ಸಿ. ಪಾಟೀಲ್ ಸೇರಿದಂತೆ ಉತ್ತರ ಕರ್ನಾಟಕ ಭಾಗದ ಶಾಸಕರು, ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ. ಧಾರವಾಡ ವಿಶ್ವವಿದ್ಯಾನಿಲಯದಲ್ಲೇ ಸೈಬರ್ ಕಾನೂನು, ಸಂವಿಧಾನಿಕ ಕಾನೂನು, ವಾಣಿಜ್ಯ ಹಾಗೂ ಅಂತಾರಾಷ್ಟ್ರೀಯ ಕಾನೂನು, ಅಧ್ಯಯನ ವಿಭಾಗಗಳನ್ನು ಆರಂಭಿಸಬಹುದು ಎಂದು ಪತ್ರದಲ್ಲಿ ತಿಳಿಸಿದ್ದಾರೆ.

<><*<><>*><>

ಪಶು ವೈದ್ಯಾಧಿಕಾರಿಗಳ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಬೆಂಗಳೂರಿನಲ್ಲಿಂದು ಸಿಐಡಿ ಅಧಿಕಾರಿಗಳ ಮುಂದೆ ವಿಚಾರಣೆಗೆ ಹಾಜರಾದರು. ತನಿಖಾಧಿಕಾರಿ ಎಸಿಪಿ ರಾಘವೇಂದ್ರ ಹೆಗಡೆ, ಜ್ಞಾನೇಂದ್ರ ಕುಮಾರ್ ಅವರ ವಿಚಾರಣೆ ನಡೆಸಿದ್ದಾರೆ. ಪ್ರಕರಣದ ಹಣಕಾಸಿನ ಅಂಶಗಳನ್ನು ಇಡಿ ಪರಿಶೀಲನೆ ನಡೆಸುತ್ತಿದ್ದು, ನೇಮಕಾತಿ ಪ್ರಕ್ರಿಯೆಯಲ್ಲಿನ ಅಕ್ರಮಗಳು ಮತ್ತು ವಿವಿಧ ಅಧಿಕಾರಿಗಳ ಪಾತ್ರದ ಬಗ್ಗೆ ಸಿಐಡಿ ತನಿಖೆ ನಡೆಸುತ್ತಿದೆ.

<><*<><>*><>

ಸಮಾಜದಲ್ಲಿ ಜಾತಿ, ಧರ್ಮದ ಹೆಸರಿನಲ್ಲಿ ವಿಭಜನೆ ಮಾಡುವ ಮನೋಭಾವಕ್ಕೆ ಅವಕಾಶ ನೀಡದೆ, ಎಲ್ಲರೂ ಸಮಾನರು ಎಂಬ ಮಾನವತಾ ಮೌಲ್ಯವನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಭಿಪ್ರಾಯಪಟ್ಟಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವತಿಯಿಂದ ನಡೆದ ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಪೌರಕಾರ್ಮಿಕರ ದಿನಾಚರಣೆ-೨೦೨೬" ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅವರು ಡಾ.ಅಂಬೇಡ್ಕರ್ ಅವರು ಯಾವುದೇ ಒಂದು ಜಾತಿ ಅಥವಾ ಸಮುದಾಯಕ್ಕೆ ಸೀಮಿತವಾದವರಲ್ಲ. ಎಲ್ಲಾ ಸಮುದಾಯಗಳ ಏಳಿಗೆಗೆ-

ಅಭ್ಯುದಯಕ್ಕೆ ಬೆಳಕಾದವರು ಎಂದು ತಿಳಿಸಿದ್ದಾರೆ.  ಪೌರಕಾರ್ಮಿಕರ ಕುಂದುಕೊರತೆಗಳು ಮತ್ತು ಬೇಡಿಕೆಗಳ ಕುರಿತು ಮುಖ್ಯಮಂತ್ರಿ ಗಮನಕ್ಕೆ ತಂದು, ಸಕಾರಾತ್ಮಕವಾಗಿ ಸ್ಪಂದಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದ್ದಾರೆ.

**<><*<><>*><>**

ಚಾಮರಾಜನಗರ ಜಿಲ್ಲೆಯ ಕಾವೇರಿ ವನ್ಯಜೀವಿಧಾಮದಲ್ಲಿ ನಡೆದ ಶೂಟೌಟ್ ಪ್ರಕರಣದ ತನಿಖೆಯ ವರದಿಯನ್ನು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಜಿಲ್ಲಾಧಿಕಾರಿ ಶ್ರೀರೂಪಾ ಸಲ್ಲಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಿದ ಹಿನ್ನೆಲೆಯಲ್ಲಿ ಕೊಳ್ಳೇಗಾಲದ ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ ತನಿಖೆ ನಡೆಸಿದ್ದರು. ಹನೂರು ವಲಯದ ಕರಡಿಕಲ್ಲು ಗುಡ್ಡದಲ್ಲಿ ಆಂಥೋಣಿಸ್ವಾಮಿ, ಪೀಟರ್ ಹಾಗೂ  ಕುಮಾರ್ ಎಂಬುವರು ಗುಂಡಿನ ದಾಳಿಯಲ್ಲಿ ಮೃತಪಟ್ಟಿದ್ದರು.

**<><*<><>*><>**

ಉಪ ಲೋಕಾಯುಕ್ತ ಬಿ. ವೀರಪ್ಪ ಇಂದು ಮಂಡ್ಯ ಜಿಲ್ಲೆಯ ಮದ್ದೂರು ನಗರಸಭೆ ವ್ಯಾಪ್ತಿಯ ತ್ಯಾಜ್ಯ ನೀರು ಸಂಸ್ಕರಣಾ ಘಟಕಕ್ಕೆ ಭೇಟಿ ನೀಡಿ, ಸ್ವಚ್ಛತೆ ಹಾಗೂ ತ್ಯಾಜ್ಯ ನಿರ್ವಹಣಾ ವ್ಯವಸ್ಥೆ ಪರಿಶೀಲಿಸಿದರು. ಘಟಕದಲ್ಲಿ ನೀರು ಸಂಸ್ಕರಣೆ  ಪ್ರಕ್ರಿಯೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ತ್ಯಾಜ್ಯ ನೀರನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ನಿಯಮಾನುಸಾರ ವಿಲೇವಾರಿ ಮಾಡುವಂತೆ ಸೂಚಿಸಿದರು. ತ್ಯಾಜ್ಯ ನೀರು ಯಾವುದೇ ಕಾರಣಕ್ಕೂ ಶಿಂಷಾ ನದಿಗೆ ಸೇರ್ಪಡೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಹಾಗೂ ಶಾಶ್ವತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

**<><*<><>*><>**

**ಸಂಕ್ಷಿಪ್ತ ಸುದ್ದಿ -೧**

೧. ರಾಜ್ಯದಲ್ಲಿ ಬರ ಪೀಡಿತ ತಾಲೂಕುಗಳ ಘೋಷಣೆಯು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಮಾನದಂಡಗಳು ಹಾಗೂ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾರ್ಗದರ್ಶನದಂತೆಯೇ ನಡೆದಿದೆ ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ತಿಳಿಸಿದ್ದಾರೆ.

೨. ನೇಪಾಳದಲ್ಲಿ ಸಂಭವಿಸಿರುವ ಪ್ರವಾಹ ದುರಂತದ ಹಿನ್ನೆಲೆಯಲ್ಲಿ, ವಿಜಯನಗರ ಜಿಲ್ಲೆಯ ಪ್ರವಾಸಿಗರು ನಾಪತ್ತೆಯಾಗಿದ್ದರೆ ಅಥವಾ ಸಂಪರ್ಕಕ್ಕೆ ಸಿಗದೇ ಇದ್ದಲ್ಲಿ, ಅವರ ವಿವರಗಳನ್ನು ತಕ್ಷಣ ಜಿಲ್ಲಾಡಳಿತಕ್ಕೆ ನೀಡುವಂತೆ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ  ಮನವಿ ಮಾಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ  <>*><>**